ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

"ಜೀವನ ಚೈತ್ರ ಯಾತ್ರೆ" ಕಾರ್ಯಕ್ರಮದ ಜಾರಿ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

606 (766) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಹಾಗೂ ರೈಲ್ವೆ ಇಲಾಖೆಯ (IRCTC) ಸಹಯೋಗದೊಂದಿಗೆ ರಾಜ್ಯದಲ್ಲಿರುವ 60 ವರ್ಷ ಮೀರಿದ ಬಡತನ ರೇಖೆಗಿಂತ ಕೆಳಗಿರುವ ಆಯ್ದ ಫಲಾನುಭವಿಗಳಿಗೆ ಉಚಿತವಾಗಿ ರಾಜ್ಯ ಮತ್ತು ದೇಶದ ಪ್ರಸಿದ್ಧ ತೀರ್ಥ ಕ್ಷೇತ್ರಗಳನ್ನು ದರ್ಶಿಸಲು "ಜೀವನ ಚೈತ್ರ ಯಾತ್ರೆ" ಯನ್ನು ಜಾರಿಗೊಳಿಸಲಾಗಿದೆಯೇ;

(ಆ) ಜಾರಿಗೊಳಿಸಿದ್ದಲ್ಲಿ, ಎಷ್ಟು ಜನ ಫಲಾನುಭವಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಜಾರಿಗೊಳಿಸದಿದ್ದಲ್ಲಿ, ಕಾರಣಗಳೇನು ಮತ್ತು ಯಾವಾಗ ಜಾರಿಗೊಳಿಸಲಾಗುವುದು ?